## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಸರ್ಕಾರಿ ನೌಕರರಾದ (1) ಶ್ರೀ ಎಂ.ಆಂಜನಪ್ಪ, ಕಾರ್ಯನಿರ್ವಾಹಕಾಧಿಕಾರಿ, ತಾಲ್ಲೂಕು ಪಂಚಾಯಿತಿ, ಕುಣಿಗಲ್, (2) ಶ್ರೀ ಚಂದ್ರೇಗೌಡ, ಅಧ್ಯಕ್ಷರು, ಕೊತ್ತಗೆರೆ ಗ್ರಾಮ ಪಂಚಾಯಿತಿ, ಕುಣಿಗಲ್ ತಾಲ್ಲೂಕು, (3) ಶ್ರೀ ಕೆ. ಈಶ್ವರ್ ಪ್ರಸಾದ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, (4) ಶ್ರೀಮತಿ ಶೈಲಜಾ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, (5) ಶ್ರೀಮತಿ ನಾಗರತ್ನ, ಕಂಪ್ಯೂಟರ್ ಆಪರೇಟರ್, ಕೊತ್ತಗೆರೆ ಗ್ರಾಮ ಪಂಚಾಯಿತಿ, ಕುಣಿಗಲ್ ತಾಲ್ಲೂಕು, ತುಮಕೂರು ಜಿಲ್ಲೆ ರವರು ಕರ್ತವ್ಯ ಲೋಪ / ದುರ್ವರ್ತನೆ ಎಸಗಿರುವ ಬಗ್ಗೆ.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ.ಕಂಪ್ಲೇಂಟ್/ಉಪಲೋಕ್/ಬಿಡಿ–4122/2014/ಎಆರ್‌ಎಲ್‌ಓ–2 ದಿ:17–12–2016.

**ಪ್ರಸ್ತಾವನೆ:**

ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ, ಶ್ರೀ ಹೆಚ್.ಬಿ. ಶಂಕರಲಿಂಗೇಗೌಡ ಬಿನ್ ಬೋರಲಿಂಗಯ್ಯ, ಕೆ. ಹೊಸಹಳ್ಳಿ ಗ್ರಾಮ, ಕೊತ್ತಗೆರೆ ಹೋಬಳಿ, ಕುಣಿಗಲ್ ತಾಲ್ಲೂಕು, ತುಮಕೂರು ಜಿಲ್ಲೆ ಇವರು ಲೋಕಾಯುಕ್ತ ಕಛೇರಿಗೆ ದೂರು ಸಲ್ಲಿಸಿರುತ್ತಾರೆ. ಸದರಿ ದೂರಿನಲ್ಲಿ, ಕುಣಿಗಲ್ ತಾಲ್ಲೂಕು ಕೊತ್ತಗೆರೆ ಗ್ರಾಮ ಪಂಚಾಯಿತಿಯಿಂದ (1) ಕಾಮಗಾರಿ ಸಂಕೇತ ಆರ್.ಸಿ./992248711660 (2) ಕಾಮಗಾರಿ ಸಂಕೇತ ಆರ್.ಸಿ./992248711662 ಇವುಗಳ ಕಾಮಗಾರಿಗಳನ್ನು ಎದುರುದಾರರು ಮಾಡದೆ ನಕಲಿ ದಾಖಲೆಗಳನ್ನು ಸೃಷ್ಠಿ ಮಾಡಿಕೊಂಡು, ಅಧಿಕಾರ ದುರುಪಯೋಗ ಪಡಿಸಿಕೊಂಡು, ಕಾನೂನು ಉಲ್ಲಂಘನೆ ಮಾಡಿ ಅಕ್ರಮವಾಗಿ ಹಣ ಸಂಪಾದನೆ ಮಾಡುತ್ತಿದ್ದಾರೆಂದು ತಿಳಿಸಿರುತ್ತಾರೆ. ಈ ದೂರನ್ನು ಓಂಬಡ್ಸ್‌ಮನ್‌ಗೆ ವರ್ಗಾಯಿಸಿದ್ದು, ಅದರಲ್ಲಿ ಕಾಮಗಾರಿಗಳು ಅಕ್ರಮವಾಗಿರುವುದು ದೃಢಪಟ್ಟಿರುತ್ತದೆ. 2 ಮತ್ತು 3ನೇ ಎದುರುದಾರರು 2 ಕಾಮಗಾರಿಗಳ ಸಂಬಂಧ ಕ್ರಮವಾಗಿ ರೂ.2,34,458/– ಮತ್ತು ರೂ.1,95,416/–ಗಳನ್ನು ಡ್ರಾ ಮಾಡಿರುತ್ತಾರೆ. ಎರಡೂ ಕಾಮಗಾರಿಗಳಲ್ಲಿ ಬೋಗಸ್ ಹೆಸರುಗಳುಳ್ಳ ಜಾಬ್ ಕಾರ್ಡ್‌ಗಳನ್ನು ಎನ್.ಎಂ.ಆರ್.ಗಳಲ್ಲಿ ಬಳಸಿದ್ದಾರೆ. ಆದ್ದರಿಂದ ಒಟ್ಟು ರೂ.4,29,874/–ಗಳನ್ನು ಈ ಇಬ್ಬರಿಂದ ಸಮ ಪ್ರಮಾಣದಲ್ಲಿ ಅಂದರೆ, ರೂ.2,14,937/–ಗಳನ್ನು ವಸೂಲಿ ಮಾಡಿ ನರೇಗಾ ಯೋಜನೆಯ ಲೆಕ್ಕ ಶೀರ್ಷಿಕೆಗೆ ಜಮಾ ಮಾಡಲು ಸೂಕ್ತ ಕ್ರಮ ವಹಿಸುವಂತೆ ಸಿ.ಇ.ಓ., ತುಮಕೂರು ರವರಿಗೆ ಸೂಚಿಸಿದ್ದಾರೆ. ಬೋಗಸ್ ಜಾಬ್ ಕಾರ್ಡ್‌ಗಳನ್ನು ಬಳಸಿಕೊಂಡು ಕಾಮಗಾರಿಗಳ ಎನ್.ಎಂ.ಆರ್.ಗಳಲ್ಲಿ ಹಣ ಡ್ರಾ ಮಾಡಿರುವ 2, 3 ಹಾಗೂ 5ನೇ ಎದುರುದಾರರವರಿಂದ ಒಟ್ಟು ರೂ.31668/–ಗಳನ್ನು ಕ್ರಮವಾಗಿ 2:2:1 ಅನುಪಾತದಲ್ಲಿ ಅಂದರೆ, 2, 3ನೇ ಎದುರುದಾರರು ತಲಾ ರೂ.12,668/– ಮತ್ತು 5ನೇ ಎದುರುದಾರರವರಿಂದ ರೂ.6,332/–ಗಳನ್ನು ವಸೂಲಿ ಮಾಡಿ ನರೇಗಾ ಲೆಕ್ಕ ಶೀರ್ಷಿಕೆಗೆ ಜಮಾ ಮಾಡಲು ಸೂಚಿಸಿದ್ದಾರೆಂದು ಮಾನ್ಯ ಉಪಲೋಕಾಯುಕ್ತರು ತಮ್ಮ ವರದಿಯಲ್ಲಿ ತಿಳಿಸಿರುತ್ತಾರೆ.

2ನೇ ಎದುರುದಾರರಾದ ಶ್ರೀ ಚಂದ್ರೇಗೌಡ, ಅಧ್ಯಕ್ಷರು, ಕೊತ್ತಗೆರೆ ಗ್ರಾಮ ಪಂಚಾಯಿತಿ, ಕುಣಿಗಲ್ ತಾಲ್ಲೂಕು, ತುಮಕೂರು ಜಿಲ್ಲೆ ಇವರ ಅಧಿಕಾರಾವಧಿ ಮುಗಿದಿದ್ದು, ಹಾಗೂ 5ನೇ ಎದುರುದಾರರಾದ ಶ್ರೀಮತಿ ನಾಗರತ್ನ ಕಂಪ್ಯೂಟರ್ ಆಪರೇಟರ್, ಕೊತ್ತಗೆರೆ ಗ್ರಾಮ ಪಂಚಾಯಿತಿ, ಕುಣಿಗಲ್ ತಾಲ್ಲೂಕು, ತುಮಕೂರು ಜಿಲ್ಲೆ ರವರು ಖಾಸಗಿ ವ್ಯಕ್ತಿಯಾಗಿರುವುದರಿಂದ, ಇವರಿಗೆ ಕರ್ನಾಟಕ ಸಿವಿಲ್ ಸೇವಾ ನಿಯಮಗಳು ಅನ್ವಯಿಸುವುದಿಲ್ಲ. ಆದರೆ ಇವರ ವಿರುದ್ಧ ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(1)ರಲ್ಲಿ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿರುತ್ತಾರೆ.

3ನೇ ಎದುರುದಾರರಾದ ಶ್ರೀ ಕೆ. ಈಶ್ವರ್ ಪ್ರಸಾದ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕೊತ್ತಗೆರೆ ಗ್ರಾಮ ಪಂಚಾಯಿತಿ, ಕುಣಿಗಲ್ ತಾಲ್ಲೂಕು, ತುಮಕೂರು ಜಿಲ್ಲೆ ರವರು ಈ ಎಲ್ಲಾ ಯೋಜನೆಯ ಹೊಣೆಗಾರರಾಗಿದ್ದು, ಅವರು ಅಕ್ರಮ ಕಾಮಾಗಾರಿಗಳನ್ನು ಕೈಗೊಂಡು ಸರ್ಕಾರದ ಹಣ ದುರುಪಯೋಗ ಪಡಿಸಿದ್ದಾರೆಂದು ಮೇಲ್ನೋಟಕ್ಕೆ ಕಂಡುಬರುತ್ತದೆ. ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ ಅವರು ಸರ್ಕಾರಿ ಸೇವಕರಿಗೆ ತರವಲ್ಲದ

2

ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ / ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ, ನಿಯಮ 3(1) (i) ಮತ್ತು (ii)ರನ್ವಯ ದುರ್ನಡತೆ ಎಸಗಿದ್ದು, ಶಿಸ್ತು ಕ್ರಮಕ್ಕೆ ಬಾಧ್ಯರಾಗಿದ್ದಾರೆಂದು ಕಂಡುಬಂದಿರುವುದರಿಂದ, 3ನೇ ಎದುರುದಾರರಾದ ಶ್ರೀ ಕೆ. ಈಶ್ವರ್ ಪ್ರಸಾದ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕೊತ್ತಗೆರೆ ಗ್ರಾಮ ಪಂಚಾಯಿತಿ, ಕುಣಿಗಲ್ ತಾಲ್ಲೂಕು, ತುಮಕೂರು ಜಿಲ್ಲೆ ಇವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಮತ್ತು ಹಾಗೆಯೇ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14–ಎ ರಡಿಯಲ್ಲಿ ಇವರ ವಿರುದ್ಧ ವಿಚಾರಣೆ ನಡೆಸಲು, ತಮಗೆ ಒಪ್ಪಿಸುವಂತೆ ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರವರ ವರದಿಯನ್ನು ಪರಿಶೀಲಿಸಿ, ಈ ಪ್ರಕರಣದಲ್ಲಿ ಒಳಗೊಂಡಿರುವ 3ನೇ ಎದುರುದಾರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸಲು ಸರ್ಕಾರ ನಿರ್ಧರಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 898 ಗ್ರಾಪಂಕಾ 2016 ಬೆಂಗಳೂರು, ದಿನಾಂಕ:07–01–2017.</u>**

3ನೇ ಎದುರುದಾರರಾದ ಶ್ರೀ ಕೆ. ಈಶ್ವರ್ ಪ್ರಸಾದ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕೊತ್ತಗೆರೆ ಗ್ರಾಮ ಪಂಚಾಯಿತಿ, ಕುಣಿಗಲ್ ತಾಲ್ಲೂಕು, ತುಮಕೂರು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ–8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ.ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:
1. ಮಹಾಲೇಖಪಾಲರು (ಎ & ಇ), ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಕುಣಿಗಲ್, ತುಮಕೂರು ಜಿಲ್ಲೆ.
6. ಶ್ರೀ ಕೆ. ಈಶ್ವರ್ ಪ್ರಸಾದ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕೊತ್ತಗೆರೆ ಗ್ರಾಮ ಪಂಚಾಯಿತಿ, ಕುಣಿಗಲ್ ತಾಲ್ಲೂಕು, (ಹಾಲಿ ಜಿಲ್ಲಾ ಪಂಚಾಯಿತಿ ಕಛೇರಿ, ತುಮಕೂರು) ತುಮಕೂರು ಜಿಲ್ಲೆ.
7. ಗಣಕ ಕೋಶ (ವೆಬ್‌ಸೈಟ್‌ಗೆ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.